# ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳಿಗೆ ಥರ್ಮಲ್ ಸ್ಕ್ರೀನಿಂಗ್ ಕಡ್ಡಾಯ:ಪಿ.ಸುನೀಲ್ ಕುಮಾರ್

ಕೊಪ್ಪಳ, ಜೂ. 08–: ಪ್ರತಿ ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳಿಗೆ ಥರ್ಮಲ್ ಸ್ಕ್ರೀನಿಂಗ್ ಕಡ್ಡಾಯವಾಗಿದ್ದು, ಅನಾರೋಗ್ಯದ ಲಕ್ಷಣಗಳು ಕಂಡು ಬಂದಲ್ಲಿ ಅವರಿಗೆ ಪ್ರತ್ಯೇಕ ಕೊಠಡಿಯಲ್ಲಿ ಪರೀಕ್ಷೆ ಬರೆಯಲು ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಪಿ. ಸುನೀಲ್ ಕುಮಾರ್ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕೋವಿಡ್–19 ರ ಸ್ಟ್ಯಾಂಡರ್ಡ್ ಆಪರೇಟಿಂಗ್ ಪ್ರೊಸಿಜರ್‌ಗಳನ್ನು ನಿರ್ವಹಿಸುವ ಕುರಿತು ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಪರೀಕ್ಷಾ ಕೇಂದ್ರಕ್ಕೆ ಆಗಮಿಸುವ ಪ್ರತಿ ವಿದ್ಯಾರ್ಥಿಗೆ ಥರ್ಮಲ್ ಸ್ಕ್ರೀನಿಂಗ್ ಮಾಡಬೇಕು. ಇದಕ್ಕಾಗಿ ಆರೋಗ್ಯ ಇಲಾಖೆ ಥರ್ಮಲ್ ಸ್ಕ್ರೀನಿಂಗ್ ಉಪಕರಣಗಳೊಂದಿಗೆ ಸಿಬ್ಬಂದಿಯನ್ನು ನಿಯೋಜಿಸಬೇಕು. ಪರೀಕ್ಷಾ ಕೇಂದ್ರದ ಕೊಠಡಿಗಳಲ್ಲಿ ಪ್ರತಿ ದಿನ ಸೋಂಕು ನಿವಾರಕಗಳನ್ನು ಸಿಂಪಡಿಸಬೇಕು. ಈಗಾಗಲೇ ಗುರುತಿಸಲಾದ ಕ್ವಾರಂಟೈನ್ ಕೇಂದ್ರಗಳನ್ನು ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳು ಉಳಿದುಕೊಳ್ಳಲು ಬಳಸುವಂತಿಲ್ಲ. ಪರೀಕ್ಷಾ ಕೇಂದ್ರಕ್ಕೆ ಹತ್ತಿರವಿರುವ ವಿದ್ಯಾರ್ಥಿ ವಸತಿ ನಿಲಯದಲ್ಲಿ ಮಕ್ಕಳಿಗೆ ಉಳಿದುಕೊಂಡು ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಿ. ಪಾಲಕರನ್ನು ಪರೀಕ್ಷಾ ಕೇಂದ್ರದೊಳಗೆ ಬಿಡುವಂತಿಲ್ಲ. ಪರೀಕ್ಷಾ ಕೇಂದ್ರದ ಸುತ್ತ 200 ಮೀ. ಅಂತರದಲ್ಲಿ ಸೆಕ್ಷನ್ 144 ನಿಷೇಧಾಜ್ಞೆ ಜಾರಿಯಿದ್ದು, ಝೆರಾಕ್ಸ್ ಸೆಂಟರ್‌ಗಳನ್ನು ಬಂದ್ ಮಾಡಬೇಕು. ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳು ಪಾಲಿಸಬೇಕಾದ ನಿಯಮಗಳನ್ನು ಮೈಕ್ ಮೂಲಕ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿ. ಒಂದು ವೇಳೆ ಯಾವುದಾದರೂ ವಿದ್ಯಾರ್ಥಿಗೆ ಆರೋಗ್ಯ ಸಮಸ್ಯೆಗಳಿದ್ದಲ್ಲಿ ಅವರು ಖುದ್ದಾಗಿ ಬಂದು ಮಾಹಿತಿ ನೀಡುವಂತೆ ತಿಳಿಸಿ. ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ಬೆಳಗ್ಗೆ 8.30 ಗಂಟೆಗೆ ಕಡ್ಡಾಯವಾಗಿ ಹಾಜರಾಗಬೇಕು. ಇದರಿಂದ ಥರ್ಮಲ್ ಸ್ಕ್ರೀನಿಂಗ್ ಮತ್ತು ತಪಾಸಣೆಗೆ ಅನುಕೂಲವಾಗಲಿದೆ. ವಿದ್ಯಾರ್ಥಿಗಳು ಅನುಸರಿಸಬೇಕಾದ ನಿಯಮಗಳ ಕುರಿತು ವಿಡಿಯೋ ಚಿತ್ರೀಕರಿಸಿ ಅದನ್ನು ಪರೀಕ್ಷೆಗೆ ಮೊದಲು ಮಕ್ಕಳಿಗೆ ತಲುಪಿಸಿ ಎಂದು ಸೂಚನೆಗಳನ್ನು ನೀಡಿದರು.

ಜೂನ್ 25 ರಿಂದ ಜುಲೈ 04 ರವರೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ನಡೆಯಲಿದ್ದು, ಜಿಲ್ಲೆಯಾದ್ಯಂತ ರೆಗ್ಯೂಲರ್ ವಿದ್ಯಾರ್ಥಿಗಳು–19,896, ಪುನರಾವರ್ತಿತ ವಿದ್ಯಾರ್ಥಿಗಳು–1,513 ಹಾಗೂ ಬಾಹ್ಯ ವಿದ್ಯಾರ್ಥಿಗಳು 774 ಸೇರಿದಂತೆ ಒಟ್ಟು 22,183 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಜಿಲ್ಲೆಯಲ್ಲಿ 63 ಮುಖ್ಯ ಪರೀಕ್ಷಾ ಕೇಂದ್ರಗಳು, 17 ಉಪ ಕೇಂದ್ರಗಳನ್ನು ಗುರುತಿಸಲಾಗಿದೆ. ಅವುಗಳಲ್ಲಿ 3 ಪರೀಕ್ಷಾ ಕೇಂದ್ರಗಳಲ್ಲಿ ಖಾಸಗಿ ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದು, ಈ ಕೇಂದ್ರಗಳನ್ನು ಸೂಕ್ಷ್ಮ ಕೇಂದ್ರಗಳೆಂದು ಗುರುತಿಸಲಾಗಿದ್ದು, ಪೊಲೀಸ್ ಇಲಾಖೆ ಈ ಕೇಂದ್ರಗಳಿಗೆ ಹೆಚ್ಚಿನ ಭದ್ರತೆ ಒದಗಿಸಬೇಕು. ಜಿಲ್ಲೆಯಲ್ಲಿ ಅತೀ ಸೂಕ್ಷ್ಮ ಪರೀಕ್ಷಾ ಕೇಂದ್ರಗಳು ಯಾವುದೂ ಇಲ್ಲ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ವಿಶೇಷ ಕೋವಿಡ್ ಟಾಸ್ಕ್ ಫೋರ್ಸ್ ಅನ್ನು ರಚಿಸಲಾಗಿದ್ದು, ಈ ತಂಡವು ವಿದ್ಯಾರ್ಥಿಗಳ ಸ್ಕ್ರೀನಿಂಗ್ ಸೇರಿದಂತೆ ಕೋವಿಡ್‌ಗೆ ಸಂಬಂಧಿಸಿದ ಕರ್ತವ್ಯಗಳನ್ನು ಮಾತ್ರ ಮಾಡಬೇಕು. ಪ್ರತಿ ಕೊಠಡಿಗೆ 18 ರಿಂದ 20 ವಿದ್ಯಾರ್ಥಿಗಳು ಮಾತ್ರ ಪರೀಕ್ಷೆ ಬರೆಯಲು ವ್ಯವಸ್ಥೆ ಮಾಡುವ ಮೂಲಕ ಸಾಮಾಜಿಕ ಅಂತರವನ್ನು ಕಾಪಾಡಬೇಕು. ಗ್ರಾಮೀಣ ಭಾಗದಿಂದ ಪರೀಕ್ಷೆಗೆ ಆಗಮಿಸುವ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸಾರಿಗೆ ಇಲಾಖೆಯಿಂದ ಬಸ್‌ಗಳ ವ್ಯವಸ್ಥೆಯನ್ನು ಕಲ್ಪಿಸಬೇಕು. ವಸತಿ ನಿಲಯದಲ್ಲಿದ್ದು ಪರೀಕ್ಷೆ ಬರೆಯಲು ಬಯಸುವ ವಿದ್ಯಾರ್ಥಿಗಳಿಗೆ ಕೋವಿಡ್ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ವಸತಿ ನಿಲಯಗಳಲ್ಲಿ ವ್ಯವಸ್ಥೆ ಮಾಡಬೇಕು ಎಂದು ಅವರು ಹೇಳಿದರು.



ಅಪರ ಜಿಲ್ಲಾಧಿಕಾರಿ ಎಂ.ಪಿ. ಮಾರುತಿ ಮಾತನಾಡಿ ಜಿಲ್ಲಾ ಮಟ್ಟದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಒಂದು ಸಹಾಯವಾಣಿಯನ್ನು ಆರಂಭಿಸಬೇಕು.

ಈ ಸಹಾಯವಾಣಿಗೆ ವಿದ್ಯಾರ್ಥಿಗಳು ಕರೆ ಮಾಡಿ ಪರೀಕ್ಷಾ ಕೇಂದ್ರಗಳು, ವಸತಿ ನಿಲಯಗಳು, ಅನುಸರಿಸಬೇಕಾದ ನಿಯಮಗಳು, ಪರೀಕ್ಷೆಗಳ ಕುರಿತ ಪ್ರಶ್ನೆಗಳನ್ನು ಕೇಳಬಹುದು. ಇಲಾಖೆಯವರು ಸಂಪೂರ್ಣ ಮಾಹಿತಿಯೊಂದಿಗೆ ಎರಡು ಪಾಳಿಗಳಲ್ಲಿ ಕರ್ತವ್ಯ ನಿರ್ವಹಿಸಿ ವಿದ್ಯಾರ್ಥಿಗಳು ಕೇಳುವ ಪ್ರಶ್ನೆಗಳಿಗೆ ಸೂಕ್ತ ಮಾಹಿತಿ ನೀಡುವುದರ ಜೊತೆಗೆ ಪರೀಕ್ಷಾ ಭಯವನ್ನು ಹೋಗಲಾಡಿಸುವ ಪ್ರಯತ್ನವನ್ನೂ ಮಾಡಬೇಕು. ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳಿಗೆ ಗೊಂದಲ ಉಂಟಾಗಬಾರದು ಆ ರೀತಿಯಲ್ಲಿ ಶಿಕ್ಷಣ ಇಲಾಖೆಯವರು ವ್ಯವಸ್ಥೆ ಕುರಿತು ಮಾಹಿತಿ ನೀಡಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಸಿಇಒ ರಘುನಂದನ್ ಮೂರ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಸಿದ್ರಾಮೇಶ್ವರ್, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ದೊಡ್ಡಬಸಪ್ಪ ನೀರಲಕೇರಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಲಿಂಗರಾಜು, ನಿರ್ಮಿತಿ ಕೇಂದ್ರದ ಶಶಿಧರ್ ಸೇರಿದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೋವಿಡ್–19 ನಿಯಂತ್ರಣಕ್ಕೆ ಜಿಲ್ಲಾಡಳಿತದ ಪರಿಶ್ರಮ ಸ್ವಾಗತಾರ್ಹ

ಗದಗ.ಜೂನ್ 8 : ಗದಗ ಜಿಲ್ಲಾಡಳಿತದ ಪರಿಶ್ರಮದಿಂದ ಕೋವಿಡ್–19 ನಿಯಂತ್ರಣದ ಕುರಿತು ಬೇರೆ ಜಿಲ್ಲೆಗಳಿಗೆ ಹೋಲಿಸಿದಾಗ ಈ ಜಿಲ್ಲೆಯು ನೆಮ್ಮದಿದಾಯಕವಾಗಿದೆ ಎಂದು ರಾಜ್ಯದ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಸಿ.ಸಿ.ಪಾಟೀಲ ಅವರು ನುಡಿದರು.



ಗದಗ ಜಿಲ್ಲಾದಿ, ಕಾರಿಗಳ ಕಚೇರಿ ಸಭಾಂಗ ಣದಲ್ಲಿಂದು ಜರುಗಿದ ಪತ್ರಿಕಾ ಗೋಷ್ಟಿಯನ್ನುದ್ದೇಶಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಇದುವರೆಗೆ 43 ಕೊರೋನಾ ಪ್ರಕರಣಗಳು ದೃಢಪಟ್ಟಿದ್ದು ಆ ಪೈಕಿ 23 ಪ್ರಕರಣಗಳು ಹೊರರಾಜ್ಯದಿಂದ ಬಂದವರಾಗಿರುತ್ತಾರೆ. 33 ಸೋಂಕಿತರು ಈಗಾಗಲೇ ಗುಣಮುಖರಾಗಿರುತ್ತಾರೆ. 8 ಜನರಿಗೆ ಕೋವಿಡ್–19 ನಿಗದಿತ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಜಿಲ್ಲೆಯಲ್ಲಿ ಈವರೆಗೆ ಒಟ್ಟು 13,333 ಜನರನ್ನು ಹೋಮ್ ಕ್ವಾರಂಟೈನ್‌ನಲ್ಲಿ ಹಾಗೂ 237 ಜನರನ್ನು ಸಾಂಸ್ಥಿಕ ಕ್ವಾರಂಟೈನ್‌ನಲ್ಲಿಡಲಾಗಿದೆ. ಜಿಲ್ಲೆಯಲ್ಲಿ ಒಟ್ಟು 9 ನಿಯಂತ್ರಿತ ಪ್ರದೇಶಗಳ ಪೈಕಿ ರಂಗನವಾಡಾ ಪ್ರದೇಶ ಹಾಗೂ ರೋಣ ತಾಲೂಕಿನ ಕೃಷ್ಣಾಪುರ ಪ್ರದೇಶಗಳನ್ನು ನಿಯಂತ್ರಿತ ಪ್ರದೇಶಗಳೆಂದು ಹೊರಡಿಸಿದ್ದ ಆದೇಶವನ್ನು ಹಿಂಪಡೆಯಲಾಗಿದ್ದು ಅವುಗಳು ಈಗ ಸಾಮಾನ್ಯ ಪ್ರದೇಶಗಳಾಗಿ ಮಾರ್ಪಟ್ಟಿವೆ. ಆದಕಾರಣ ಈಗ ಜಿಲ್ಲೆಯಲ್ಲಿ 7 ನಿಯಂತ್ರಿತ ಪ್ರದೇಶಗಳು ಸಕ್ರಿಯವಾಗಿವೆ. ನಿಯಂತ್ರಿತ ಪ್ರದೇಶಗಳಲ್ಲಿನ 1,536 ಜನರ ಆರೋಗ್ಯ ತಪಾಸಣೆಯನ್ನು ನಡೆಸಲಾಗಿದೆ. 777 ವಿವಿದ ರಾಜ್ಯಗಳಲ್ಲಿನ ವಲಸಿಗರನ್ನು ಹುಬ್ಬಳ್ಳಿಯ ರೈಲು ನಿಲ್ದಾಣದವರೆಗೆ ಉಚಿತವಾಗಿ ಕಳುಹಿಸಿಕೊಡಲಾಗಿದೆ. ಇದರಲ್ಲಿ 446 ಜನ ವಲಸೆ ಕಾರ್ಮಿಕರಿದ್ದಾರೆ. 4867 ಜನರು ಗೋವಾ ರಾಜ್ಯದಿಂದ ವಲಸೆ ಬಂದವರಿದ್ದಾರೆ. 432 ಜನರು ಮಹಾರಾಷ್ಟ್ರದಿಂದ ಗದಗ ರೈಲು ನಿಲ್ದಾಣಕ್ಕೆ ಆಗಮಿಸಿದ್ದು ಇದರಲ್ಲಿ 199 ಜನ ಗದಗ ಜಿಲ್ಲೆಯವರಾಗಿದ್ದು ಅವರನ್ನು ಸಾಂಸ್ಥಿಕ ಕ್ವಾರಂಟೈನ್ ನಲ್ಲಿರಿಸಿ ಅವರ ಗಂಟಲು ದ್ರವ ಪರೀಕ್ಷೆ ಜರುಗಿಸಲಾಗಿದೆ. ಕೋವಿಡ್ –19 ನಿಯಂತ್ರಣದ ನಿಮಿತ್ತ ಹಟ್ಟಿ ಗೋಲ್ಡ್ ಮೈನ್ಸ್ ಲಿಮಿಟೆಡ್‌ನಿಂದ ಆಹಾರ ಕಿಟ್‌ಗಳನ್ನು ಜಿಲ್ಲಾಡಳಿತಕ್ಕೆ ನೀಡಲಾಗಿದ್ದು ಜಿಲ್ಲೆಯ ನಿಯಂತ್ರಿತ ಪ್ರದೇಶಗಳಲ್ಲಿನ ಜನರಿಗೆ ಆಹಾರ ಕಿಟ್‌ಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವ ಸಿ.ಸಿ.ಪಾಟೀಲ ಅವರು ತಿಳಿಸಿದರು.

ಜಿಲ್ಲೆಯಲ್ಲಿ ವಿವಿಧ ಭಾಗಗಳಲ್ಲಿ ಮಳೆಯಾಗಿದ್ದು, ಹೆಸರು ಬೀಜದ ದಾಸ್ತಾನು ಸಾಕಷ್ಟಿದೆ. ಬಿತ್ತನೆ ಬೀಜದ ಬೇಡಿಕೆಯಿದ್ದು ರೈತರಿಗೆ ವಿತರಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು.ರೋಣ ಶಾಸಕ ಕಳಕಪ್ಪ ಬಂಡಿ, ಗದಗ ಜಿಲ್ಲಾಧಿಕಾರಿ ಎಂ.ಜಿ. ಹಿರೇಮಠ, ಅಪರ ಜಿಲ್ಲಾಧಿಕಾರಿ ಸತೀಶಕುಮಾರ್ ಎಂ,ಜಿಲ್ಲಾ ಪೊಲೀಸ ವರಿಷ್ಟಾಧಿಕಾರಿ ಯತೀಶ್ ಎನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಆನಂದ್ ಕೆ,ಉಪ ಅರಣ್ಯ ಸಂರಕ್ಷಣಾಧಿಕಾರಿ ಸೂರ್ಯಸೇನ, ಉಪವಿ ಭಾಗಾದಿ ,ಕಾರಿ ರಾಯಪ್ಪ ಹುಣಸಗಿ ಪತ್ರಿಕಾಗೋಷ್ಟಿಯಲ್ಲಿ ಉಪಸ್ಥಿತರಿದ್ದರು.

## ವಿದ್ಯುತ್ ನಿಲುಗಡೆ

ಗದಗ.ಜೂನ್ 8 : 110 ಕೆವ್ಹಿ ಶಿರಹಟ್ಟಿ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ದಿನಾಂಕ: 10.06.2020 ರಂದು ಮುಂಜಾನೆ 10.00 ಘಂಟೆಯಿಂದ ಸಾ0ಯಂಕಾಲ 05.00 ಘಂಟೆ0ಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. ಕಾರಣ 110 ಕೆವ್ಹಿ ಶಿರಹಟ್ಟಿ ಉಪಕೇಂದ್ರದಿಂದ ವಿದ್ಯುತ್ ಪೂರೈಕೆ 0ಯಾಗುತ್ತಿರುವ ನಗರ / ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ, ಎನ್.ಜೆ.ವೈ ಫೀಡರ್, ಐ.ಪಿ.ಪಿ ಫೀಡರ್ ಹಾಗೂ ಮೆ: ಬಿ.ಪಿ.ಸಿ.ಎಲ್ 1 ಮತ್ತು 2, ಎಲಿಶಿರೂರ ಇವರ ಗಾಳಿಯಂತ್ರ ಘಟಕಕ್ಕೆ ವಿದ್ಯುತ್ ವ್ಯತ್ಯ0ಯವಾಗಲಿದೆ. ಸಾರ್ವಜನಿಕರು ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

# ರಾಜ್ಯಸಭಾ ಚುನಾವಣೆ ಮಲ್ಲಿಕಾರ್ಜುನ ಖರ್ಗೆ ಗೆ ಬಿ ಫಾರಂ

ಬೆಂಗಳೂರು.ಜೂನ್.08.ಬೆಂಗಳೂರಿನ ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ನಡೆದ ಶಾಸಕಾಂಗ ಪಕ್ಷದ ಸಭೆ ನಂತರ ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಅವರು ರಾಜ್ಯಸಭೆ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಬಿ ಫಾರಂ ನೀಡಿದರು. ಈ ವೇಳೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ, ವಿಧಾನ ಪರಿಷತ್ ವಿರೋಧ



ಪಕ್ಷದ ನಾಯಕ ಎಸ್.ಆರ್ ಪಾಟೀಲ್, ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಈಶ್ವರ್ ಖಂಡ್ರೆ, ಸಲೀಂ ಅಹಮದ್, ಸತೀಶ್ ಜಾರಕಿಹೊಳಿ, ಮಾಜಿ ಅಧ್ಯಕ್ಷರಾದ ಆರ್.ವಿ ದೇಶಪಾಂಡೆ, ಡಾ.ಜಿ. ಪರಮೇಶ್ವರ್, ದಿನೇಶ್ ಗುಂಡೂರಾವ್ ಮತ್ತಿತರ ನಾಯಕರು ಉಪಸ್ಥಿತರಿದ್ದರು.

# ಕೋವಿಡ್–19 ದಿಂದ ಗುಣಮುಖರಾದ 29 ಜನ ರೋಗಿಗಳು ಜಿಲ್ಲಾಸ್ಪತ್ರೆಯಿಂದ ಬಿಡುಗಡೆ

ವಿಜಯಪುರ.ಜೂ.08: ಜಿಲ್ಲೆಯಲ್ಲಿ ಈವರೆಗೆ ಒಟ್ಟು 202 ಕೋವಿಡ್–19 ಪಾಸಿಟಿವ್ ಪ್ರಕರಣಗಳು ದೃಢಪಟ್ಟಿದ್ದು, ಜಿಲ್ಲಾಸ್ಪತ್ರೆಯಲ್ಲಿ 88 ರೋಗಿಗಳು ಕೋವಿಡ್–19 ಪಾಸಿಟಿವ್ ಸಕ್ರಿಯ ರೋಗಿಗಳಾಗಿದ್ದಾರೆ. ಇಂದು ಯಾವುದೇ ಕೋವಿಡ್–19 ಪಾಸಿಟಿವ್ ಪ್ರಕರಣ ದೃಢಪಟ್ಟಿಲ್ಲ ಎಂದು ಜಿಲ್ಲಾಧಿಕಾರಿ ವೈ.ಎಸ್ ಪಾಟೀಲ ಅವರು ತಿಳಿಸಿದ್ದಾರೆ.



ಜಿಲ್ಲಾಸ್ಪತ್ರೆಯಿಂದ ಇಂದು ಒಟ್ಟು 29 ಜನ ಕೋವಿಡ್–19 ಪಾಸಿಟಿವ್ ರೋಗಿಗಳು ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ್ದಾರೆ.

ರೋಗಿ ಸಂಖ್ಯೆ 2206 (50 ವರ್ಷದ ಪುರುಷ), ರೋಗಿ ಸಂಖ್ಯೆ 2712 (23 ವರ್ಷದ ಯುವಕ), ರೋಗಿ ಸಂಖ್ಯೆ 2839 (37 ವರ್ಷದ ಮಹಿಳೆ) ರೋಗಿ ಸಂಖ್ಯೆ 2928 (38 ವರ್ಷದ ಪುರುಷ), ರೋಗಿ ಸಂಖ್ಯೆ 2929(30 ವರ್ಷದ ಪುರುಷ).

ರೋಗಿ ಸಂಖ್ಯೆ 3178 (29 ವರ್ಷದ ಯುವಕ) ರೋಗಿ ಸಂಖ್ಯೆ 3152 (50 ವರ್ಷದ ಪುರುಷ) ರೋಗಿ ಸಂಖ್ಯೆ 4808 (24 ವರ್ಷದ ಯುವತಿ), ರೋಗಿ ಸಂಖ್ಯೆ 3181 (4 ವರ್ಷದ ಬಾಲಕಿ) ರೋಗಿ ಸಂಖ್ಯೆ 3172 (59 ವರ್ಷದ ಪುರುಷ) ರೋಗಿ ಸಂಖ್ಯೆ 4579 (12 ವರ್ಷದ ಬಾಲಕ) ರೋಗಿ ಸಂಖ್ಯೆ 4580 (21 ವರ್ಷದ ಯುವಕ) ಬಿಡುಗಡೆ ಹೊಂದಿದ್ದಾರೆ.

ಅದರಂತೆ ರೋಗಿ ಸಂಖ್ಯೆ 3174 (5 ವರ್ಷದ ಬಾಲಕ),ರೋಗಿ ಸಂಖ್ಯೆ 4582 (28 ವರ್ಷದ ಯುವತಿ), ರೋಗಿ ಸಂಖ್ಯೆ 4583 (50 ವರ್ಷದ ಪುರುಷ) ರೋಗಿ ಸಂಖ್ಯೆ 4584 (8 ವರ್ಷದ ಬಾಲಕಿ).

ರೋಗಿ ಸಂಖ್ಯೆ 4585 (35 ವರ್ಷದ ಮಹಿಳೆ), ರೋಗಿ ಸಂಖ್ಯೆ 4587 (24 ವರ್ಷದ ಯುವಕ) ರೋಗಿ ಸಂಖ್ಯೆ 4588 (28 ವರ್ಷದ ಯುವಕ) ರೋಗಿ ಸಂಖ್ಯೆ 4589 (16 ವರ್ಷದ ಯುವತಿ), ರೋಗಿ ಸಂಖ್ಯೆ 4590 (23 ವರ್ಷದ ಯುವತಿ) ರೋಗಿ ಸಂಖ್ಯೆ 4591 (9 ವರ್ಷದ ಬಾಲಕಿ) ರೋಗಿ ಸಂಖ್ಯೆ 4592 (27 ವರ್ಷದ ಯುವತಿ) ರೋಗಿ ಸಂಖ್ಯೆ 4593 (16 ವರ್ಷದ ಯುವಕ), ರೋಗಿ ಸಂಖ್ಯೆ 4594 (23 ವರ್ಷದ ಯುವಕ), ರೋಗಿ ಸಂಖ್ಯೆ 4595 (30 ವರ್ಷದ ಯುವಕ) ರೋಗಿ ಸಂಖ್ಯೆ 4596 (35 ವರ್ಷದ ಯುವಕ), ರೋಗಿ ಸಂಖ್ಯೆ 4597(35 ವರ್ಷದ ಯುವತಿ), ರೋಗಿ ಸಂಖ್ಯೆ 4601 (39 ವರ್ಷದ ಪುರುಷ) ಆಗಿದ್ದಾರೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಈವರೆಗೆ ವಿದೇಶ ಸೇರಿದಂತೆ ಇತರ ಪ್ರದೇಶಗಳಿಂದ 28736 ಜನರು ಬಂದ ಬಗ್ಗೆ ವರದಿಯಾಗಿದ್ದು, ಇವರ ಮೇಲೆ ತೀವ್ರ ನಿಗಾ ಇಡಲಾಗಿದೆ.

ಒಟ್ಟು 202 ಕೋವಿಡ್ –19 ಪಾಸಿಟಿವ್ ಪ್ರಕರಣಗಳು ದೃಢಪಟ್ಟಿದ್ದಾರೆ. 8433 ಜನರು 28 ದಿನಗಳ ಐಸೋಲೇಶನ್ ಅವಧಿ ಪೂರ್ಣಗೊಳಿಸಿದ್ದಾರೆ.

20189 ಜನರು (1 ರಿಂದ 28 ದಿನಗಳ) ರಿಪೋರ್ಟಿಂಗ್ ಅವಧಿಯಲ್ಲಿದ್ದು, ಈವರೆಗೆ ಒಟ್ಟು 6 ಜನ ಕೋವಿಡ್–19 ರೋಗಿಗಳು ಮೃತಪಟ್ಟಿದ್ದಾರೆ.

108 ಜನರು ಕೋವಿಡ್–19 ರೋಗದಿಂದ ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ್ದು, 88 ಜನರು ಆಸ್ಪತ್ರೆಯಲ್ಲಿರುವ ಕೋವಿಡ್–19 ಸಕ್ರಿಯ ರೋಗಿಗಳಾಗಿದ್ದಾರೆ.

ಈವರೆಗೆ 26358 ಜನರ ಗಂಟಲು ದ್ರವ ಮಾದರಿಯನ್ನು ಸಂಗ್ರಹಿಸಿದ್ದು, 25730 ಜನರ ನೆಗೆಟಿವ್ ವರದಿ ಬಂದಿದೆ. ಇನ್ನೂ 426 ಜನರ ಗಂಟಲು ದ್ರವ ಮಾದರಿ ಪರೀಕ್ಷಾ ವರದಿ ಬರಬೇಕಾಗಿದೆ ಎಂದು ಅವರು ತಿಳಿಸಿದ್ದಾರೆ.

# ಕಾರಟಗಿಯ ಅಶೋಕ್ ಗಸ್ತಿಯವರಿಗೆ ಸಿಹಿ ತಿನ್ನಿಸಿದ ನಳಿನ್ ಕುಮಾರ್ ಕಟೀಲ



ಕೊಪ್ಪಳ ; ಪ್ರವಾಸದಲ್ಲಿರುವ ಬಿಜೆಪಿ ರಾಜ್ಯಾಧ್ಯಕ್ಷರಾದ ನಳೀನ್ ಕುಮಾರ್ ಕಟೀಲ್‌ರವರು ಕೊಪ್ಪಳ ಜಿಲ್ಲೆಯ ಕನಕಗಿರಿ ವಿಧಾನಸಭಾ ಕ್ಷೇತ್ರದ ಕಾರಟಗಿಯಲ್ಲಿ ರಾಜ್ಯಸಭಾ ಸದಸ್ಯ ಅಭ್ಯರ್ಥಿಗಳಾಗಿ ನಾಮ ನಿರ್ದೇಶನಗೊಂಡಿರುವ ಅಶೋಕ್ ಗಸ್ತಿ ಅವರಿಗೆ ಸಿಹಿ ತಿನ್ನಿಸಿ, ಅಭಿನಂದನೆ ಸಲ್ಲಿಸಿದರೆ, ಶ್ರೀ ಈರಣ್ಣ ಕಡಾಡಿ ಅವರಿಗೆ ದೂರವಾಣಿ ಮೂಲಕ ಮಾತನಾಡಿ ಅಭಿನಂದನೆ ಸಲ್ಲಿಸಿದರು.ಬಳ್ಳಾರಿ ವಿಭಾಗದಲ್ಲಿ ನಡೆದ ಸಂಘಟನಾ ಸಭೆಯಲ್ಲಿ ರಾಜ್ಯ ಸಂಘಟನಾ ಪ್ರಧಾನ ಕಾರ್ಯದರ್ಶಿಯವರಾದ ಶ್ರೀ ಅರುಣ್ ಕುಮಾರ್ ಜೀರವರು, ಸಚಿವರಾದ ಶ್ರೀ ಆನಂದ್ ಸಿಂಗ್‌ರವರು, ಸಂಸದರಾದ ಶ್ರೀ ದೇವೇಂದ್ರಪ್ಪರವರು, ಶಾಸಕರಾದ ಶ್ರೀ ಸೋಮಶೇಖರ ರೆಡ್ಡಿಯವರು, ಶ್ರೀ ಸೋಮಲಿಂಗಪ್ಪರವರು, ಶ್ರೀ ಹಾಲಪ್ಪ ಆಚಾರ್‌ರವರು ಸೇರಿದಂತೆ ಹಲವು ವಿಭಾಗದ ಎಲ್ಲ ಪದಾಧಿಕಾರಿಗಳು ಉಪಸ್ಥಿತರಿದ್ದರು.

# "ಸ್ವಚ್ಛಗ್ರಾಮ–ಸ್ವಚ್ಛ ಪರಿಸರ" ಸ್ವಚ್ಛತಾ ಪಾಕ್ಷಿಕಾಚರಣೆ

ಬೆಳಗಾವಿ–:ಸ್ವಚ್ಛ ಭಾರತ ಮಿಷನ್ (ಗ್ರಾ) ಯೋಜನೆಯಡಿ, ಗ್ರಾಮಗಳಲ್ಲಿ ದ್ರವ ತ್ಯಾಜ್ಯ ನಿರ್ವಹಣೆ ಮಾಡುವುದು ಒಂದು ಸವಾಲಾಗಿದೆ. ಮನೆ ಹಂತದಲ್ಲಿ ಅಡುಗೆ ಮಾಡಲು, ಬಟ್ಟೆ ಒಗೆಯಲು, ಪಾತ್ರೆ ತೊಳೆಯಲು ಮತ್ತು ಸ್ನಾನ ಮಾಡಲು ಉಪಯೋಗಿಸುವ ತ್ಯಾಜ್ಯದ ನೀರು ಗ್ರಾಮದ ರಸ್ತೆ, ಮನೆಯ ಅಂಗಳ, ಚರಂಡಿ, ಗ್ರಾಮದ ಬೀದಿಗಳಲ್ಲಿ ಹರಿಯಬಿಡುವುದು ಸಾಮಾನ್ಯವಾಗಿದೆ. ಇದಕ್ಕೆ ಹಲವು ಕಾರಣಗಳಿವೆ, ಗ್ರಾಮೀಣ ಜನರಿಗೆ ಒಮ್ಮೆ ಗೃಹ ಬಳಕೆಯಲ್ಲಿ ಉಪಯೋಗಿಸಿದ ನೀರನ್ನು ಸರಿಯಾದ ರೀತಿಯಲ್ಲಿ ವೈಜ್ಞಾನಿಕವಾಗಿ ವಿಲೇವಾರ ಮಾಡಲು ತಾಂತ್ರಿಕ ವಿಧಾನಗಳ ಕುರಿತು ಅರಿವಿನ ಕೊರತೆಯದೆ. ಈ ಹಿನ್ನೆಲೆಯಲ್ಲಿ ಗ್ರಾಮೀಣ ಜನರಿಗೆ ದ್ರವ ತ್ಯಾಜ್ಯದ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯವಿದ್ದು, ಗ್ರಾಮೀಣ ಪ್ರದೇಶದಲ್ಲಿ ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ವ್ಯಾಪಕವಾದ ಜಾಗೃತಿ ಮೂಡಿಸಲು ಹಾಗೂ ಗ್ರಾಮಗಳಲ್ಲಿ ದ್ರವ ತ್ಯಾಜ್ಯ ನಿರ್ವಹಣೆಯ ವಿಧಾನಗಳನ್ನು ಉತ್ತೇಜಿಸುವ ಸಲುವಾಗಿ ದಿನಾಂಕ 05–06–2020 ರಿಂದ 19–06–2020 ರವರೆಗೆ "ಸ್ವಚ್ಛಗ್ರಾಮ–ಸ್ವಚ್ಛ ಪರಿಸರ" ಎಂಬ ಹೆಸರಿನಡಿ ಸ್ವಚ್ಛತಾ ಪಾಕ್ಷಿಕಾಚರಣೆಯನ್ನು ಆಯೋಜಿಸಲು ಇಲಾಖೆಯು ಉದ್ದೇಶಿಸಿದೆ.

ಆದ್ದರಿಂದ ಈ ಸ್ವಚ್ಛತಾ ಪಾಕ್ಷಿಕಾಚರಣೆಯ ಪ್ರಯುಕ್ತ ಸ್ವಚ್ಛಗ್ರಾಮಗಳನ್ನಾಗಿ ರೂಪಿಸುವಲ್ಲಿ ದ್ರವ ತ್ಯಾಜ್ಯ ಸೂಕ್ತ ನಿರ್ವಹಣೆ ಎಷ್ಟೊಂದು ಪ್ರಾಮುಖ್ಯತೆ ವಹಿಸಿದೆ ಎಂಬುದರ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಮನೆಯ ಹಂತದಲ್ಲಿ ಗೃಹ ಬಳಕೆಗೆ ಉಪಯೋಗಿಸಿದ ನೀರು ಸೂಕ್ತವಾಗಿ ವಿಲೇವಾರಿ ಮಾಡುವುದನ್ನು ಉತ್ತೇಜಿಸಲು ಪೂರಕವಾದ ಮಾಹಿತಿಯನ್ನು ಒಳಗೊಂಡ ಉತ್ತಮ ಕಿರುಚಿತ್ರ ತಯಾರಿಕೆ, ಮಾದರಿ ಹಾಗೂ ಯಶೋಗಾಥೆ (ಉತ್ತಮ ಗುಣಮಟ್ಟದ ಛಾಯಾಚಿತ್ರಗಳೊಂದಿಗೆ ಲೇಖನ ಬರಹ)ಗಳನ್ನು ಇ–ಮೇಲ್ (cleanbelagavi@gamil.com) ಮೂಲಕ ಆಹ್ವಾನಿಸಿದೆ ಮತ್ತು ಅವುಗಳನ್ನು ಮೌಲ್ಯಮಾಪನ ಮಾಡಿ ಉತ್ತಮವಾದವುಗಳಿಗೆ ಸೂಕ್ತ ಬಹುಮಾನ ನೀಡಲು ತಿರ್ಮಾನಿಸಲಾಗಿದೆ.

ರಚನಾತ್ಮಕವಾದ ವಿವಿಧ ಮಾಹಿತಿ, ಶಿಕ್ಷಣ ಮತ್ತು ಸಂವಹನ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಗ್ರಾಮೀಣ ಜನರಲ್ಲಿ ಶೌಚಾಲಯ ಬಳಕೆ, ಘನ ತ್ಯಾಜ್ಯ ನಿರ್ವಹಣೆ, ದ್ರವ ತ್ಯಾಜ್ಯ ನಿರ್ವಹಣೆ, ಶುದ್ಧ ಕುಡಿಯುವ ನೀರಿನ ಮಹತ್ವ ಕುರಿತು ವ್ಯಾಪಕವಾದ ಜಾಗೃತಿ ಮೂಡಿಸಲಾಗುವುದು ಮತ್ತು ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ:9480854002 ಅಥವಾ 8073330475 ಇವರನ್ನು ಸಂಪರ್ಕಿಸಬಹುದಾಗಿದೆ.

## ನೇಕಾರರ ಸಾಲಮನ್ನಾ ಯೋಜನೆ ವಿಸ್ತರಣೆ

ಬೆಳಗಾವಿ, ಜೂನ್ 08 : ರಾಜ್ಯದ ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳು, ಪಟ್ಟಣ ಸಹಕಾರಿ ಬ್ಯಾಂಕುಗಳು, ಕೃಷಿಯೇತರ ಪತ್ತಿನ ಸಹಕಾರಿ ಸಂಘಗಳು, ವಿವಿದೋದ್ದೇಶ ಸಹಕಾರಿ ಸಂಘಗಳು, ಕೈಗಾರಿಕಾ ಸಹಕಾರಿ ಬ್ಯಾಂಕುಗಳು, ಇತರೆ ಸಹಕಾರಿ ಬ್ಯಾಂಕುಗಳು, ಸೌಹಾರ್ದ ಸಹಕಾರಿ ಸಂಘ/ ಸೌಹಾರ್ದ ಸಹಕಾರಿ ಬ್ಯಾಂಕ್, ಕೃಷಿ ಪತ್ತಿನ ಸಹಕಾರಿ ಸಂಘಗಳಿಂದ ಸಾಲ ಪಡೆದು ಜನೆವರಿ 1 ರಿಂದ ಮಾರ್ಚ್ 31 ರ ಅವಧಿಯೊಳಗೆ ಪಾವತಿಸಿದಂತಹ ನೇಕಾರರಿಗೂ ಸಹ ರೂ.1 ಲಕ್ಷಗಳ ವರೆಗಿನ (ಅಸಲು ಮತ್ತು ಬಡ್ಡಿ ಸೇರಿ) ಸಾಲಮನ್ನಾ ಯೋಜನೆಯನ್ನು ವಿಸ್ತರಿಸಿ ಪಾವತಿ ಮಾಡಿದಂತಹ ಸಾಲದ ಮೊತ್ತವನ್ನು ಮರುಪಾವತಿಸಲು ಆದೇಶ ಹೊರಡಿಸಲಾಗಿದೆ. ಈಗಾಗಲೇ ವೆಬ್ ಐ.ಡಿ ಹೊಂದಿದ ಸಂಸ್ಥೆ/ ಬ್ಯಾಂಕುಗಳು dht2019.ucbcs.in ವೆಬ್ ಪೋರ್ಟಲ್‌ಗೆ ತಮ್ಮ ಸಂಸ್ಥೆ/ ಬ್ಯಾಂಕುಗಳ ಸಾಲಮನ್ನಾ ಬಿಲ್ಲುಗಳನ್ನು ಜೂನ್ 15 ರೊಳಗಾಗಿ ಅಪ್‌ಲೋಡ್ ಮಾಡಿ, ಈ ಕಛೇರಿಗೆ ಹಾರ್ಡ ಕಾಪಿಯನ್ನು ಸಲ್ಲಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, "ಸಾಮರ್ಥ್ಯ ಸೌಧ" ಅನಗೋಳ ಇವರ ಕಛೇರಿಗೆ ಭೇಟಿ ನೀಡಿ ಸಂಪರ್ಕಿಸಬೇಕು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರಲಗಿ ಗ್ರಾಮದಲ್ಲಿ 1.53 ಕೋಟಿ ರೂ.ಗಳ ಕಾಮಗಾರಿಗೆ ಚಾಲನೆ

(1ನೇ ಪುಟದಿಂದ)

ಕೋವಿಡ್–19 ಸೋಂಕು ಕುರಿತು ಭಯಬೇಡ ಜಾಗೃತಿ ಇರಲಿ. ಕೋವಿಡ್ ಸೋಂಕಿನ ಜೊತೆ ಜೊತೆಗೆ ಜೀನವ ನಡೆಸುವುದು ಇಂದಿನ ಅನಿವರ್ಯತೆಯಾಗಿದೆ. ಗ್ರಾಮಸ್ಥರು ಕೊರೋನಾ ಕುರಿತು ಅರಿವು ಹೊಂದಬೇಕು. ಸರ್ವಜನಿಕ ಸ್ಥಳಗಳು ಸೇರಿದಂತೆ ಹಲವೆಡೆ ಸಾಮಾಜಿಕ ಅಂತರ ಕಾಪಾಡಿಕೊಳ್ಳುವುದರಿಂದ ಕೊರೋನಾ ನಿಯಂತ್ರಣ ಮಾಡಬೇಕು ಎಂದರು.

ಕರ್ಯಕ್ರಮದಲ್ಲಿ ಜಿಲ್ಲಾಪಂಚಾಯತ್ ಸದಸ್ಯ ಕುಮಾರ ಶಿದ್ದಲಿಂಗೇಶ್ವರ ಹೆಚ್. ಪಾಟೀಲ್, ಗ್ರಾಮ ಪಂಚಾಯತ್ ಅಧ್ಯಕ್ಷ ಎ.ಟಿ.ಇಬ್ರಾಹಿಂಪುರ, ಗ್ರಾಮದ ಪ್ರಮುಖರಾದ ಶ್ರೀಶೈಲಪ್ಪ ರೋಣದ, ಶಿವನಪ್ಪ ಮೇಟಿ, ಸಿ.ಜಿ.ಹಿರೇಮಠ, ಮಲ್ಲಪ್ಪ ಮಲ್ಲನಗೌಡರ ಸೇರಿದಂತೆ ಗ್ರಾಮ ಪಂಚಾಯತ್ ಸದಸ್ಯರು, ಅಧಿಕಾರಿಗಳು ಹಾಜರಿದ್ದರು